ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	344
ಮಾನ್ಯ ಸದಸ್ಯರ ಹೆಸರು	:	ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ವಿಷಯ	:	ಕೊಡಗು ಜಿಲ್ಲೆಯಲ್ಲಿನ ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು.
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.
ಉತ್ತರಿಸುವ ದಿನಾಂಕ:	:	06-03-2020.

ಕ್ರ.ಸ	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯಲ್ಲಿ ಸರ್ಕಾರ ಗುರುತಿಸಿರುವ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು; ಅವು ಯಾವುವು; (ಸಂಪೂರ್ಣ ವಿವರ ನೀಡುವುದು)	ಪ್ರವಾಸೋದ್ಯಮ ಇಲಾಖೆಯಿಂದ ಕೊಡಗು ಜಿಲ್ಲೆಯಲ್ಲಿ ಸರ್ಕಾರ 14 ಪ್ರವಾಸಿ ತಾಣಗಳನ್ನು ಗುರುತಿಸಿದ್ದು ವಿವರ ಕೆಳಗಿನಂತಿದೆ. (ಕೆಳಗಿನ ಪಟ್ಟಿ ನೋಡಿ)
ಆ)	ಸದರಿ ತಾಣಗಳಲ್ಲಿ ಪ್ರವಾಸಿಗರಿಗೆ ಬೇಕಾದ ಹಾಗೂ ಅತ್ಯವಶ್ಯಕವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;	ಸದರಿ ತಾಣಗಳಲ್ಲಿ ಪ್ರವಾಸಿಗರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.
ಇ)	ಒದಗಿಸಿದ್ದಲ್ಲಿ, 2017-18, 2018-19 ಮತ್ತು 2019-20ನೇ ಸಾಲಿನಲ್ಲಿ ಸದರಿ ತಾಣಗಳಲ್ಲಿ ಕೈಗೊಂಡ ಕಾಮಗಾರಿಗಳ ವಿವರ ಹಾಗೂ ಸದರಿ ಕಾಮಗಾರಿಗಳ ಅಂದಾಜು ಮೊತ್ತ, ಬಿಡುಗಡೆಯಾದ ಅನುದಾನ, ವಿನಿಯೋಗಿಸಿದ ಅನುದಾನ ಹಾಗೂ ಕಾಮಗಾರಿಗಳ ಪ್ರಗತಿ ಹಂತದ ಸಂಪೂರ್ಣ ವಿವರ ನೀಡುವುದು?	ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ.

ತಾಲ್ಲೂಕು	ಪ್ರವಾಸಿ ತಾಣಗಳು	
	ಹಾಲಿ ಇರುವ ತಾಣಗಳು	ನೂತನತಾಣಗಳು
ಮಡಿಕೇರಿ	ಮಡಿಕೇರಿ, ಅಬ್ಬಿಫಾಲ್ಸ್, ತಲಕಾವೇರಿ, ನಾಲ್ಕನಾಡು, ಭಾಗಮಂಡಲ, ಓಂಕಾರೇಶ್ವರ ದೇವಸ್ಥಾನ	ಕಕ್ಕಬೇ ಶ್ರೀ ಇಗುತೊಪ್ಪ
ಸೋಮವಾರಪೇಟೆ	ಹಾರಂಗಿಜಲಾಶಯ, ಕೂಡಿಗೆ, ಚಟ್ಟಳ್ಳಿ, ನಿಸರ್ಗಧಾಮ	–
ವಿರಾಜಪೇಟೆ	ನಾಗರಹೊಳೆ, ಇರ್ಪು	ಕುಂದಾಡಬೆಟ್ಟ

ಕಡತ ಸಂಖ್ಯೆ: ಟಿಓಆರ್ 31 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಅನುಬಂಧ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 344

ಕ್ರ. ಸಂ	ಕಾಮಗಾರಿಯ ಹೆಸರು	ಅಂದಾಜು ಮೊತ್ತ	ಬಿಡುಗಡೆ/ ವಿನಿಯೋಗಿಸಿದ ಅನುದಾನ	ಕಾಮಗಾರಿಗಳ ಪ್ರಗತಿ ಹಂತದ ಸಂಪೂರ್ಣ ವಿವರ
	2017-18			
1	ಕೊಡಗು ಜಿಲ್ಲೆಯ ಕುಶಾಲನಗರದ ಮಡಿಕೇರಿ ರಸ್ತೆಯಲ್ಲಿರುವ ತಾವರೆಕೆರೆ ಹತ್ತಿರ ಪ್ರವಾಸಿ ಮೂಲಸೌಕರ್ಯ ಅಭಿವೃದ್ಧಿ	50.00	20.00	ಕಾಮಗಾರಿ ಪ್ರಾರಂಭಿಸಬೇಕಿದೆ.
2	ಕೊಡಗು ಜಿಲ್ಲೆಯ ಕೆಂಪುರಾಶಿ ಮೊಟ್ಟೆಯಿಂದ ಮಂಟಕಲ್ ಶಾಲೆವರೆಗೆ 2.00 ಕಿ.ಮೀ. ರಸ್ತೆ ಅಭಿವೃದ್ಧಿ (ತಲಕಾವೇರಿ ಬದಲಿ ಸಂಪರ್ಕರಸ್ತೆ) **(20 ಪ್ರವಾಸಿ ತಾಣಗಳ ಅಭಿವೃದ್ಧಿ ಕೂಡು ರಸ್ತೆ ಕಾಮಗಾರಿ)**	300.00	225.00	ಕಾಮಗಾರಿ ಪ್ರಗತಿಯಲ್ಲಿದೆ.
	2018-19			
3	ಮಡಿಕೇರಿಯಲ್ಲಿರುವ ಶ್ರೀ ಓಂಕಾರೇಶ್ವರ ದೇವಸ್ಥಾನ ಬಳಿ ಶೌಚಾಲಯ ಬಟ್ಟೆ ಬದಲಿಸುವ ಕೊಠಡಿ ನಿರ್ಮಾಣ.	36.60	15.00	ಕಾಮಗಾರಿ ಪ್ರಗತಿಯಲ್ಲಿದೆ.
4	ಮಡಿಕೇರಿ ತಾಲ್ಲೂಕಿನ ನಾಲ್ಕುನಾಡು ಅರಮನೆಗೆ ಸಂಪರ್ಕ ರಸ್ತೆ ಅಭಿವೃದ್ಧಿ (ಸಿ.ಸಿ.ರಸ್ತೆ) (ತಿದ್ದುಪಡಿ ಆದೇಶ ಸಂಖ್ಯೆ: ಪ್ರಇ/336/ಪ್ರವಾಯೋ/2018, ದಿನಾಂಕ: 26/12/2018)	300.00	100.00	ಕಾಮಗಾರಿ ಮುಕ್ತಾಯದ ಹಂತದಲ್ಲಿ ಇರುತ್ತದೆ.
5	ಇರ್ಪು ಜಲಪಾತ ಪ್ರವಾಸಿ ತಾಣದಲ್ಲಿ ಪಾರ್ಕಿಂಗ್ ಹಾಗೂ ಉದ್ಯಾನವನ ನಿರ್ಮಾಣ.	50.00	50.00	ದಿ:06-09-19ರಂದು ನಡೆದ ಜಿಲ್ಲಾ ಅಭಿವೃದ್ಧಿ ಸಮಿತಿ ಸಭೆಯಲ್ಲಿ ಸದರಿ ಕಾಮಗಾರಿಯನ್ನು ಅಭಿವೃದ್ಧಿ ಪಡಿಸುವ ಅಗತ್ಯತೆ ಕಂಡು ಬರದ ಕಾರಣ ಸದರಿ ಅನುದಾನವನ್ನು ದುಬಾರೆಯಲ್ಲಿ ಹೈಟೆಕ್ ಶೌಚಾಲಯವನ್ನು ನಿರ್ಮಿಸಿಲು ತೀರ್ಮಾನಿಸಿರುತ್ತಾರೆ.
6	ಸೋಮವಾರಪೇಟೆ ತಾಲ್ಲೂಕಿನ ದುಬಾರೆಯ ಬಳಿ ಕಾವೇರಿ ನದಿಗೆ ಅಡ್ಡಲಾಗಿ ತೂಗುಸೇತುವೆ ನಿರ್ಮಾಣ.	223.30	100.00	ದಿ:06-09-19ರಂದು ನಡೆದ ಜಿಲ್ಲಾ ಅಭಿವೃದ್ಧಿ ಸಮಿತಿ ಸಭೆಯಲ್ಲಿ ದುಬಾರೆಗೆ ಮಂಜೂರಾಗಿರುವ ಅನುದಾನವನ್ನು ಕಾವೇರಿ ನಿಸರ್ಗಧಾಮಕ್ಕೆ ಬಳಸಲು ಹಾಗೂ ದುಬಾರೆಯಲ್ಲಿ ತೂಗುಸೇತುವೆ ನಿರ್ಮಾಣ ಮಾಡಲು ಕೆಲವೊಂದು ಪ್ರಕ್ರಿಯೆಗಳನ್ನು ಪಾಲಿಸಬೇಕಾಗಿರುವುದರಿಂದ ಸಮಯವಾಕಾಶ ಅಗತ್ಯವಿರುವುದರಿಂದ ಹೊಸದಾಗಿ ರೂ.400.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಿ ಅನುದಾನವನ್ನು ಅರಣ್ಯ ಇಲಾಖೆಗೆ ನೀಡಿ ಅರಣ್ಯ ಇಲಾಖೆಯಿಂದ ಕಾಮಗಾರಿ ಕೈಗೊಳ್ಳಲು ಸಲ್ಲಿಸಲಾದ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.
	2019-20			
7	ಸೋಮವಾರಪೇಟೆ ತಾಲ್ಲೂಕು, ಶನಿವಾರ ಸಂತೆ ಹೋಬಳಿ, ತಪ್ಪೋವನ ಮನೆಹಳ್ಳಿ ಶ್ರೀ ಕಾಡು ಮಲ್ಲೇಶ್ವರ ದೇವಸ್ಥಾನದಿಂದ ಅಜ್ಜಯ್ಯ ವೀರಭದ್ರ ಮಠಕ್ಕೆ ಹೋಗುವ ರಸ್ತೆ ಅಭಿವೃದ್ಧಿ.	100.00	33.00	ಪ್ರಸ್ತುತ ಸಾಲಿನಲ್ಲಿ ಮೊದಲ ಕಂತಾಗಿ ರೂ.33.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಯನ್ನು ಆರಂಭಿಸಬೇಕಿದೆ.
	ಒಟ್ಟು :	1059.90	543.00	